ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 46 ಸೇಇವಿ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 11.2.2010.

**ಅಧಿಸೂಚನೆ**

ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ (7) ರ ಉಪ ನಿಯಮ (1) ರ ಪರಂತುಕದನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ತಹಸೀಲ್ದಾರ್ ಗ್ರೇಡ್-II ಸಮೂಹ `ಬಿ` ಹುದ್ದೆಗಳನ್ನು ಹೊರತುಪಡಿಸಿ ಎಲ್ಲಾ ಇಲಾಖೆ/ಸೇವೆಗಳಲ್ಲಿರುವ ಸಮೂಹ `ಬಿ` ಹುದ್ದೆಗಳ ಮೊದಲ ನೇಮಕಾತಿಗಳಿಗೆ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ನೇಮಕಾತಿ ಪ್ರಾಧಿಕಾರವೆಂದು ನಿರ್ದಿಷ್ಟಪಡಿಸಲಾಗಿದೆ.

ಪರಂತು, ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರನ್ನು ಸಮೂಹ `ಬಿ` ಹುದ್ದೆಗಳಿಗೆ ನೇಮಕಾತಿ ಪ್ರಾಧಿಕಾರವೆಂದು ಈಗಾಗಲೇ ಅಧಿಸೂಚಿಸಿರುವುದನ್ನು ಹೊರತುಪಡಿಸಿ ಕರ್ನಾಟಕ ನಾಗರಿಕ ಸೇವೆಗಳು ಸಮೂಹ-ಬಿ ಹುದ್ದೆಗಳಿಗೆ ಸರ್ಕಾರದಿಂದ ನೇಮಕಗೊಂಡವರಿಗೆ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957, ನಿಯಮ 8 ರ ಕ್ಲಾಸ್ (v) ರಿಂದ (viii) ರಲ್ಲಿ ನಿರ್ದಿಷ್ಟಪಡಿಸಿದ ದಂಡನೆಯನ್ನು ವಿಧಿಸಲು ಸರ್ಕಾರವು ಶಿಸ್ತು ಪ್ರಾಧಿಕಾರವಾಗಿ ಮುಂದುವರಿಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ. ಮಾರ್ಕಂಡೇಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

**ಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಅದರ 200 ಪ್ರತಿಗಳನ್ನು ಸರಬರಾಜು ಮಾಡಲು.